ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(2)

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 9/11/20

# ಒಂದೇ ಚುನಾವಣೆ ಸದನದಲ್ಲಿ ಚರ್ಚೆ

ಬೆಂಗಳೂರು: ಒಂದು ರಾಷ್ಟ್ರ ಒಂದು ಚುನಾವಣೆ ವಿಷಯ ಕುರಿತು ಡಿ.14 ಮತ್ತು 15 ರಂದು ರಾಜ್ಯ ವಿಧಾನಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ 80ನೇ ಅಖಿಲ ಭಾರತ ಪೀಠಾಸೀನ ಅಧಿಕಾರಿಗಳ ಸಮ್ಮೇಳನದಲ್ಲಿ ಪ್ರಸ್ತಾಪಿಸಿದ ಒಂದು ರಾಷ್ಟ್ರ-ಒಂದು ಚುನಾವಣೆ ಕುರಿತ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ದೇಶದಲ್ಲಿ ಮೊದಲ ಬಾರಿಗೆ ಈ ವಿಷಯವನ್ನು ಸದನದಲ್ಲಿ ಸಮಗ್ರವಾಗಿ ಚರ್ಚಿಸಿ ಚಿಂತನ-ಮಂಥನ ನಡೆಸಲು ತೀರ್ಮಾನಿಸಲಾಗಿದೆ ಎಂದರು.

▶ ವಿವರ: 6

# ಒಂದು ರಾಷ್ಟ್ರ ಒಂದು ಚುನಾವಣೆ ಕುರಿತು ಚರ್ಚೆ

ಬೆಂಗಳೂರು: ಒಂದು ರಾಷ್ಟ್ರ ಒಂದು ಚುನಾವಣೆ ವಿಷಯ ಕುರಿತು ಡಿಸೆಂಬರ್ 14 ಮತ್ತು 15 ರಂದು ವಿಧಾನಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಡಿಸೆಂಬರ್ 7 ರಿಂದ 15 ರ ವರೆಗೆ 15 ನೇ ವಿಧಾನಸಭೆಯ 8ನೇ ಅಧಿವೇಶನ ನಡೆಯಲಿದೆ. ಗುಜರಾತ್‌ನ ಕೆವಾಡಿಯಾದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ 80ನೇ ಅಖಿಲ ಭಾರತ ಪೀಠಾಸೀನ ಅಧಿಕಾರಿಗಳ ಸಮ್ಮೇಳನದಲ್ಲಿ ಪ್ರಸ್ತಾಪಿಸಿದ ಒಂದು ರಾಷ್ಟ್ರ-ಒಂದು ಚುನಾವಣೆ ಕುರಿತ



ವಿಷಯವನ್ನು ಗಂಭೀರವಾಗಿ ಪರಿಗಣಿಸಿ ದೇಶದಲ್ಲಿ ಮೊದಲ ಬಾರಿಗೆ ಈ ವಿಷಯವನ್ನು ಸದನದಲ್ಲಿ ಸಮಗ್ರವಾಗಿ ಚರ್ಚಿಸಿ ಚಿಂತನ-ಮಂಥನ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಒಂದು ರಾಷ್ಟ್ರ-ಒಂದು ಚುನಾವಣೆ ಕುರಿತ ಎಲ್ಲಾ ಮಜಲುಗಳ ಚರ್ಚೆ ಪೂರ್ಣ ಪ್ರಮಾಣದಲ್ಲಿ ಆಗಬೇಕೆಂಬ ಸದುದ್ದೇಶದ ಹಿನ್ನೆಲೆಯಲ್ಲಿ ತಾವು ಈಗಾಗಲೇ ಸಿಎಂ ಬಿ.ಎಸ್. ಯಡಿಯೂರಪ್ಪ ಕಾನೂನು ಸಚಿವ ಮಾಧುಸ್ವಾಮಿ, ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಹಾಗೂ ಜೆಡಿಎಸ್ ಮುಖಂಡ ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಪ್ರಸ್ತಾಪಿಸಿ ಈಗಾಗಲೇ ಎಲ್ಲರ ಸಹಕಾರವನ್ನು ಕೋರಿರುವುದಾಗಿ ತಿಳಿಸಿದರು.

ಚಳಿಗಾಲದ ಅಧಿವೇಶನದಲ್ಲಿ ಪ್ರಶ್ನೋತ್ತರ ಒಳಗೊಂಡಂತೆ ಎಲ್ಲಾ ಕಾರ್ಯಕಲಾಪಗಳು ಇರುತ್ತವೆ ಎಂದು ಸ್ಪಷ್ಟಪಡಿಸಿದ ಅವರು, ಸದನದಲ್ಲಿ ಹತ್ತು ವಿಧೇಯಕಗಳು ಮಂಡನೆಗೆ ಸಿದ್ಧವಿದೆ. ಕೊರೊನಾ ಹಿನ್ನೆಲೆಯಲ್ಲಿ ಈ ಹಿಂದೆ ಕೈಗೊಂಡ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದರು. ನರ್ಮದಾ ನದಿಯ ತಟದಲ್ಲಿ ನಿರ್ಮಿಸಿರುವ ಸರ್ದಾರ ಪಟೇಲ್ ಅವರ ಲೋಹದ ಏಕತಾ ಮೂರ್ತಿ, ಮಕ್ಕಳ ಪೋಷಕಾಂಶ ಉದ್ಯಾನ, ಆರೋಗ್ಯವನ, ಹೂಬನ, ಚಿಟ್ಟೆ ಉದ್ಯಾನ ಎಲ್ಲವನ್ನೂ ವರ್ಣಿಸಲು ಅಸಾಧ್ಯ. ಇದನ್ನು ಒಮ್ಮೆ ಕಂಡು ಕಣ್ತುಂಬಿಕೊಂಡರೆ ಮಾತ್ರ ಅರ್ಥವಾಗುತ್ತದೆ. ಹೀಗಾಗಿ ರಾಜ್ಯದ ಜನರು ಒಂದು ಬಾರಿ ಕೆವಾಡಿಯಾಕ್ಕೆ ಭೇಟಿ ನೀಡಿ ಎಂದು ಮನವಿ ಮಾಡಿದರು. ವಿಧಾನ ಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಹಾಗೂ ಇತರರಿದ್ದರು.